	ಗ್ರಾಮದ ನಿಡ್ಡೋಡಿ ಕಿಂಡಿ ಅಣೆಕಟ್ಟು ಅಭಿವೃದ್ಧಿ.	
7	ಶಿಮಂತೂರು ಗ್ರಾಮದ ಕುಚ್ಚುಗುಡ್ಡೆ ಹರಿಜನ ಕಾಲನಿಯ ಕೃಷಿ ಭೂಮಿಗೆ ನೀರಾವರಿ ಸೌಲಭ್ಯ ಒದಗಿಸುವುದು.	13.00
8	ತೆಂಕಮಿಜಾರು ಗ್ರಾಮದ ಶಾಂತಿಗಿರಿ ಎಂಬಲ್ಲಿ ಕೊರಗರ ಕಾಲನಿಯ ಕೃಷಿ ಭೂಮಿಗೆ ನೀರಾವರಿ ಸೌಲಭ್ಯ ಒದಗಿಸುವುದು.	10.00
9	ಕಲ್ಲಮುಂಡ್ಕೂರು ಗ್ರಾಮದ ಕುಂಟಲಪಲ್ಕೆ ಎಂಬಲ್ಲಿ ಹರಿಜನರ ಕೃಷಿ ಭೂಮಿಗೆ ನೀರಾವರಿ ಸೌಲಭ್ಯ ಒದಗಿಸುವುದು.	8.00
10	ಬೆಳ್ಳಾಯರು ಗ್ರಾಮದ ಕೆರೆಕಾಡು ಗಿರಿಜನ ಕಾಲನಿಯ ಕೃಷಿ ಭೂಮಿಗೆ ಕೊಳವೆ ಬಾವಿ ಮುಖಾಂತರ ನೀರಾವರಿ ಸೌಲಭ್ಯ ಒದಗಿಸುವುದು.	9.00
	ಒಟ್ಟು	**90.00**

946 ಶ್ರೀ ಅಮರೇಶ್ (ಮುಳಬಾಗಿಲು) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮುಳುಬಾಗಿಲು ತಾಲ್ಲೂಕನ್ನು ಬರಪೀಡಿತ ತಾಲ್ಲೂಕೆಂದು ಘೋಷಿಸಲಾಗಿದ್ದು, ಬರಪರಿಹಾರ ಕಾಮಗಾರಿಗಳ ನಿರ್ವಹಣೆಗಾಗಿ ಬಿಡುಗಡೆ ಮಾಡಿರುವ ಹಣವೆಷ್ಟು ;

ಆ) ಯಾವ ಯಾವ ಕಾಮಗಾರಿಗಳಿಗೆ ಎಷ್ಟೆಷ್ಟು ಹಣವನ್ನು ಬಿಡುಗಡೆಗೊಳಿಸಲಾಗಿದೆ ;

ಇ) ಸದರಿ ಹಣವು ಸಮರ್ಪಕವಾಗಿ ಬಳಕೆಯಾಗಿದೆಯೇ; ಇಲ್ಲದಿದ್ದಲ್ಲಿ ಕಾರಣಗಳೇನು ?

ಶ್ರೀ ಕರುಣಾಕರ ರೆಡ್ಡಿ (ಕಂದಾಯ ಸಚಿವರು) :

ಅ) ಬರಪೀಡಿತವೆಂದು ಘೋಷಿಸಿರುವ ತಾಲ್ಲೂಕುಗಳಲ್ಲಿ ಉದ್ಯೋಗ ಖಾತರಿ ಯೋಜನೆಯಡಿಯಲ್ಲಿ ಗರಿಷ್ಠ ಮಟ್ಟದಲ್ಲಿ ಉದ್ಯೋಗ ಒದಗಿಸಲು,

ಕುಡಿಯುವ ನೀರು ಸರಬರಾಜು ವ್ಯವಸ್ಥೆ ಹಾಗೂ ಜಾನುವಾರುಗಳ ಸಂರಕ್ಷಣೆ ಇತ್ಯಾದಿ ಕೆಲಸ ಕಾರ್ಯಗಳನ್ನು ಕೈಗೊಳ್ಳುವಂತೆ ಆದೇಶಿಸಿದೆ. ಕೋಲಾರ ಜಿಲ್ಲೆಗೆ ಪ್ರಕೃತಿ ವಿಕೋಪ ಪರಿಹಾರ ನಿಧಿಯಡಿಯಲ್ಲಿ ಒಟ್ಟು ರೂ. 750.00 ಲಕ್ಷಗಳನ್ನು ಪ್ರಕೃತಿ ವಿಕೋಪ ಪರಿಹಾರಕ್ಕಾಗಿ ಬಿಡುಗಡೆ ಮಾಡಲಾಗಿದೆ. ಮುಳುಬಾಗಿಲು ತಾಲ್ಲೂಕಿಗೆ ಬರಪರಿಹಾರ ಕಾಮಗಾರಿಗಳ ನಿರ್ವಹಣೆಗಾಗಿ ರೂ. 50.00 ಲಕ್ಷಗಳನ್ನು ಜಿಲ್ಲಾಧಿಕಾರಿಗಳು ಬಿಡುಗಡೆ ಮಾಡಿರುತ್ತಾರೆ.

ಆ) ಕೆರೆ ಅಭಿವೃದ್ಧಿ ಮತ್ತು ರಸ್ತೆ ಅಭಿವೃದ್ಧಿ ಪಡಿಸುವ ವಿವಿಧ ಸ್ವರೂಪದ 59 ಕಾಮಗಾರಿಗಳಿಗೆ ಒಟ್ಟು ರೂ. 50.00 ಲಕ್ಷಗಳನ್ನು ಜಿಲ್ಲಾಧಿಕಾರಿಗಳು ಬಿಡುಗಡೆ ಮಾಡಿದ್ದಾರೆ.

ಇ) ಒಟ್ಟು 59 ಕಾಮಗಾರಿಗಳಿಗೆ ರೂ. 49.78 ಲಕ್ಷಗಳು ವೆಚ್ಚವಾಗಿದ್ದು, 3840 ಕೂಲಿ ಕಾರ್ಮಿಕರನ್ನು ತೊಡಗಿಸಿಕೊಂಡು 60305 ಮಾನವ ದಿನಗಳನ್ನು ಸೃಜಿಸಲಾಗಿದೆ.

732 ಶ್ರೀ ಅಪ್ಪಾಸಾಹೇಬ (ಅಪ್ಪು) ಮಲ್ಲಪ್ಪ ಪಟ್ಟಣ ಶೆಟ್ಟಿ (ಬಿಜಾಪುರ ನಗರ) : ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಿಜಾಪುರ ಜಿಲ್ಲೆಯಲ್ಲಿರುವ ಆಹಾರ ಸಂಸ್ಕರಣಾ ಘಟಕಗಳ ಸಂಖ್ಯೆ ಎಷ್ಟು ಅವುಗಳಲ್ಲಿ ಸರ್ಕಾರಿ ಸ್ವಾಮ್ಯದ ಹಾಗೂ ಖಾಸಗೀ ಒಡೆತನದ ಘಟಕಗಳು ಎಷ್ಟು ಅವು ಯಾವುವು?

ಆ) ಖಾಸಗಿ ವಲಯದಲ್ಲಿ ಆಹಾರ ಸಂಸ್ಕರಣಾ ಘಟಕಗಳನ್ನು ಸ್ಥಾಪಿಸಲು ಮುಂದೆ ಬರುವ ಖಾಸಗಿ ಉದ್ದಿಮೆದಾರರಿಗೆ ಯಾವ ಉತ್ತೇಜನಗಳನ್ನು ಹಾಗೂ ರಿಯಾಯಿತಿಗಳನ್ನು ಸರ್ಕಾರ ನೀಡಲಿದೆ.

ಇ) ಬಿಜಾಪುರ ಜಿಲ್ಲೆಯ ಆಹಾರ ಧಾನ್ಯಗಳನ್ನು ಹಾಗೂ ತೋಟಗಾರಿಕೆ ಬೆಳೆಗಳನ್ನು ಬೆಳೆಯುವಲ್ಲಿ ಮುಂಚೂಣಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಈ) ಬಿಜಾಪುರ ಜಿಲ್ಲೆಯಲ್ಲಿ ಯಾವ ಯಾವ ಆಹಾರ ಸಂಸ್ಕರಣಾ ಘಟಕಗಳನ್ನು ಸ್ಥಾಪಿಸಲಾಗುವುದು ಮತ್ತು ಆ ಸ್ಥಳಗಳು ಯಾವುವು? (ವಿವರ ನೀಡುವುದು)

ಉ) ಆಹಾರ ಸಂಸ್ಕರಣಾ ಘಟಕಗಳು ಯಾವ ಹಂತದಲ್ಲಿದೆ ಹೂಡಿಕೆಯಾಗುವ ಬಂಡವಾಳ ಎಷ್ಟು? ಎಷ್ಟು ಜನರಿಗೆ ಉದ್ಯೋಗ ಅವಕಾಶ ದೊರೆಯಲಿದೆ?